**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 154 ಆರ್‌ಟಿಐ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 17.10.2014.

**ಸುತ್ತೋಲೆ**

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಸಮಗ್ರ ಅನುಷ್ಠಾನಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿಯ ಐದನೇ ಸಭೆಯ ನಡವಳಿಗಳು.

---0---

ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಮ್ಮ ಕಾರ್ಯವನ್ನು ಸರಿಯಾಗಿ ನಿರ್ವಹಿಸಿದರೂ ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ತಾವು ನಿರ್ವಹಿಸಬೇಕಾದ ಕಾರ್ಯವನ್ನು ಸರಿಯಾಗಿ ನಿರ್ವಹಿಸುತ್ತಿಲ್ಲವಾದ್ದರಿಂದ ಆಯೋಗದಲ್ಲಿ ಅಪೀಲುಗಳ ಸಂಖ್ಯೆಯು ಹೆಚ್ಚಾಗುತ್ತಿದೆ. ಆದ್ದರಿಂದ ಈ ವಿಷಯಕ್ಕೆ ಸಂಬಂಧಿಸಿದಂತೆ ಅತಿ ಹೆಚ್ಚಿನ ಮಾಹಿತಿ ಕೋರಿಕೆ ಅರ್ಜಿಗಳು ಮತ್ತು ಮೊದಲನೇ ಮೇಲ್ಮನವಿಗಳು ಬಾಕಿ ಇರುವ ಮತ್ತು ಹೆಚ್ಚಿನ ದಂಡವನ್ನು ವಿಧಿಸಲಾಗಿರುವ ಇಲಾಖೆಗಳಲ್ಲಿ ಈ ವಿಷಯದ ಬಗ್ಗೆ ಪ್ರತಿ ತಿಂಗಳಿಗೊಮ್ಮೆ ಪರಿಶೀಲನಾ ಸಭೆಗಳನ್ನು ನಡೆಸಿ ಸಂಬಂಧಪಟ್ಟ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ವರದಿಯನ್ನು ನೀಡುವಂತೆ ಹಾಗೂ ಇದಕ್ಕೆ ಕಾರಣರಾದ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೊದಲ ಮೇಲ್ಮನವಿ ಪ್ರಾಧಿಕಾರಗಳ ಮೇಲೆ ಸೂಕ್ತ ಶಿಸ್ತುಕ್ರಮ ಕೈಗೊಳ್ಳುವಂತೆ ದಿನಾಂಕ: 06.09.2014ರಂದು ನಡೆದ ಉನ್ನತ ಮಟ್ಟದ ಸಮಿತಿಯ ಐದನೇ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಆದ್ದರಿಂದ, ಮಾಹಿತಿ ಹಕ್ಕು ಕಾಯಿದೆ, 2005ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಚಿವಾಲಯ ಮಟ್ಟದಲ್ಲಿ, ಜಿಲ್ಲಾಮಟ್ಟದಲ್ಲಿ ಸ್ವೀಕೃತಗೊಳ್ಳುತ್ತಿರುವ ಅರ್ಜಿಗಳ ಸಂಖ್ಯೆ ಮತ್ತು ವಿಲೇವಾರಿ ಪ್ರಗತಿ ಇತ್ಯಾದಿಗಳನ್ನು ಪರಿಶೀಲಿಸಲು ಆಯಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಪರಿಶೀಲನಾ ಸಭೆಗಳನ್ನು ನಡೆಸುವುದು.

ಜಿಲ್ಲಾಮಟ್ಟದ ಸಮನ್ವಯ ಸಭೆಗಳಲ್ಲಿ ಮತ್ತು ಕೆ.ಡಿ.ಪಿ.ಸಭೆಗಳಲ್ಲಿ ಮಾಹಿತಿ ಹಕ್ಕು ಅನುಷ್ಠಾನಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸುವುದು. ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಗಳು ನಡೆಸುವ ಪ್ರತಿ ಸಭೆಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ, 2005ರ ಅನುಷ್ಠಾನ ಕುರಿತಂತೆ ವಿಷಯಗಳನ್ನು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದು.

ಇಲಾಖೆಗಳಲ್ಲಿ ಬಾಕಿ ಇರುವ ಮಾಹಿತಿ ಕೋರಿಕೆ ಅರ್ಜಿಗಳ ಮತ್ತು ಮೊದಲ ಮೇಲ್ಮನವಿಗಳ ವಿವರಗಳ ಸಿದ್ಧ ಮಾಹಿತಿಗಾಗಿ ಕರ್ನಾಟಕ ಮಾಹಿತಿ ಆಯೋಗದ ವಾರ್ಷಿಕ ವರದಿಯ ಕೋಷ್ಟಕ 2 ಮತ್ತು 4 ಗಳನ್ನು ಇದರೊಂದಿಗೆ ಲಗತ್ತಿಸಿದೆ.

ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು ಮೇಲಿನ ಸೂಚನೆಗಳನ್ನು ಪಾಲಿಸುತ್ತಿರುವ ಬಗ್ಗೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಬೇಕು ಮತ್ತು ಅದಕ್ಕೆ ತಪ್ಪಿದ ಸಾರ್ವಜನಿಕ ಪ್ರಾಧಿಕಾರಗಳ ವಿರುದ್ಧ ಪರಿಣಾಮಕಾರಿಯಾದ ಸೂಕ್ತ ಕ್ರಮವನ್ನು ಕೈಗೊಳ್ಳಬೇಕು.

(ಪರಮೇಶ್ ಪಾಂಡೆ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು/
ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು

Office work\Right to information-2014\circulars